**ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) ರವರು ಕೋರಿರುವ ನಿಯಮ 72ರ ಗಮನ ಸೆಳೆಯುವ ಸೂಚನೆ**

ಕಲಬುರಗಿ ಜಿಲ್ಲೆಯ ಅಫಜಲಪುರ ತಾಲ್ಲೂಕಿನ ಘತ್ತರಗಾ ಶ್ರೀ ಭಾಗ್ಯವಂತಿ ದೇವಿ ಮೂಲ ಸ್ಥಾನ ದೇವಸ್ಥಾನಕ್ಕೆ ಪ್ರತಿ ನಿತ್ಯ ಆಗಮಿಸುವ ಸಾವಿರಾರು ಭಕ್ತರು ಸಂಚರಿಸುವ ರಸ್ತೆಯು ಸಂಪೂರ್ಣವಾಗಿ ಹಾಳಾಗಿದ್ದು, ಭಕ್ತರಿಗೆ ಅಪಘಾತಗಳು ಹಾಗೂ ಅನಾನುಕೂಲ ಹೆಚ್ಚುತ್ತಿರುವುದರಿಂದ ಸರ್ಕಾರ ಈ ಕೂಡಲೇ ಸಿ.ಸಿ ರೋಡ್ ನಿರ್ಮಿಸಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಮತ್ತು ದೇವಸ್ಥಾನಕ್ಕೆ ಆಗಮಿಸುವ ಭಕ್ತರುಗಳಿಗೆ ಕುಡಿಯಲು ಶುದ್ಧ ನೀರು ಘಟಕಗಳನ್ನು ನಿರ್ಮಿಸುವುದರ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

**ನಿಯಮ 72 ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರ.**

ಕಲಬುರಗಿ ಜಿಲ್ಲೆಯ ಅಫಜಲಪುರ ತಾಲ್ಲೂಕಿನ ಘತ್ತರಗಾ ಶ್ರೀ ಭಾಗ್ಯವಂತಿ ದೇವಿ ಮೂಲ ಸ್ಥಾನ ದೇವಸ್ಥಾನಕ್ಕೆ ಪ್ರತಿ ನಿತ್ಯ ಆಗಮಿಸುವ ಸಾವಿರಾರು ಭಕ್ತರು ಸಂಚರಿಸುವ ರಸ್ತೆಯು ಸುಮಾರು 1.00 ಕಿ.ಮೀ ಉದ್ದ ಹಾಗೂ 10.00 ಮೀ ಅಗಲವಿದ್ದು, ಹಾಲಿ ರಸ್ತೆಯ ಆಯ್ದ ಭಾಗಗಳಲ್ಲಿ ಸುಮಾರು 700 ಮೀ ರಷ್ಟು ಉದ್ದ ಹಾಳಾಗಿದ್ದು, ಸದರಿ ಹಾಳಾದ ರಸ್ತೆಯನ್ನು ಅಭಿವೃದ್ಧಿಪಡಿಸಲು ಅಂದಾಜು ಮೊತ್ತ ರೂ.125.00 ಲಕ್ಷಗಳ ಅವಶ್ಯಕತೆ ಇರುತ್ತದೆ. ಸದರಿ ರಸ್ತೆ ಕಾಮಗಾರಿಯನ್ನು ಅನುದಾನದ ಲಭ್ಯತೆಯನ್ನಾಧರಿಸಿ ಅಭಿವೃದ್ಧಿಪಡಿಸಲು ಕ್ರಮವಹಿಸಬೇಕಿದೆ ಹಾಗೂ

ಸದರಿ ದೇವಸ್ಥಾನಕ್ಕೆ ಆಗಮಿಸುವ ಭಕ್ತಾದಿಗಳಿಗೆ ಈಗಾಗಲೇ ಕುಡಿಯುವ ನೀರಿನ ಸಲುವಾಗಿ 03 ಶುದ್ಧ ಕುಡಿಯುವ ನೀರಿನ ಘಟಕಗಳಿದ್ದು, ಅವುಗಳಲ್ಲಿ 02 ಘಟಕ ಕಾರ್ಯ ನಿರ್ವಹಿಸುತ್ತಿರುವುದಿಲ್ಲ ಮತ್ತು 01 ಘಟಕವು ನಿಷ್ಕ್ರಿಯಗೊಂಡಿದ್ದು, ನಿಷ್ಕ್ರಿಯಗೊಂಡಿರುವ ಘಟಕವನ್ನು ಚಾಲನೆ ಮಾಡಿ, ಉಳಿದ 02 ಘಟಕಗಳನ್ನು ದುರಸ್ಥಿಗೊಳಿಸಿ ದೇವಸ್ಥಾನಕ್ಕೆ ಆಗಮಿಸುವ ಭಕ್ತಾದಿಗಳಿಗೆ ಕುಡಿಯುವ ನೀರು ಸರಬರಾಜು ಮಾಡಲು ಕ್ರಮವಹಿಸಬೇಕಿದೆ.

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು